ಲೋಕಧ್ವನಿ

# ವಿಪತ್ತು ನಿರ್ವಹಣೆ ಜಾಗೃತಿ ಕಾರ್ಯಕ್ರಮ



**ಹಳಿಯಾಳ:** ಇಲ್ಲಿನ ಕೆಎಲ್ಎಸ್ ವಿ.ಡಿ.ಐ.ಟಿ ಹಳಿಯಾಳದಲ್ಲಿ ಅಗ್ನಿಶಾಮಕ ಮತ್ತು ವಿಪತ್ತು ನಿರ್ವಹಣೆಯ ಕುರಿತು ಜಾಗೃತಿ

ಕಾರ್ಯಕ್ರಮ ನಡೆಯಿತು. ಈ ಕಾರ್ಯಕ್ರಮವನ್ನು ಹಳಿಯಾಳ ಅಗ್ನಿಶಾಮಕ ದಳ ಮತ್ತು ಕಾಲೇಜಿನ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ವಿಭಾಗವು ಜಂಟಿಯಾಗಿ ಆಯೋಜಿಸಿತ್ತು.

ಪ್ರಾತ್ಯಕ್ಷಿಕೆಯಲ್ಲಿ, ಪಟ್ಟಣದ ಅಗ್ನಿಶಾಮಕ ದಳದ ಅಧಿಕಾರಿಗಳಾದ ಎ.ಎಸ್. ವಡ್ಡರ್ ಮತ್ತು ಬಿ.ಬಿ. ದಳವಾಯಿ ಅವರು ವಿದ್ಯಾರ್ಥಿಗಳಿಗೆ ಅಗ್ನಿ ಅವಘಡಗಳ ಸಮಯದಲ್ಲಿ ಕೈಗೊಳ್ಳಬೇಕಾದ ಮುನ್ನೆಚ್ಚರಿಕಾ ಕ್ರಮಗಳ ಬಗ್ಗೆ ವಿವರವಾದ ಮಾಹಿತಿಯನ್ನು ನೀಡಿದರು. ಘನ, ದ್ರವ ಮತ್ತು ಅನಿಲಗಳಿಂದ ಸಂಭವಿಸುವ ಅಗ್ನಿ ದುರಂತಗಳನ್ನು ನಂದಿಸಲು ಬಳಸಬೇಕಾದ ವಸ್ತುಗಳು ಮತ್ತು ವಿಧಾನಗಳ ಕುರಿತು ಸಮಗ್ರ ವಿವರಣೆಯನ್ನು ನೀಡಲಾಯಿತು. ವಿಶೇಷವಾಗಿ, ಅಡುಗೆ ಅನಿಲ ಸೋರಿಕೆ ಮತ್ತು ಸಿಲಿಂಡರ್‌ಗಳಿಗೆ ಬೆಂಕಿ ತಗುಲಿದಾಗ ಅದನ್ನು ಹೇಗೆ ನಂದಿಸಬೇಕು ಎಂಬುದನ್ನು ಪ್ರಾಯೋಗಿಕವಾಗಿ ತೋರಿಸಲಾಯಿತು.

ಅಗ್ನಿಶಾಮಕ ದಳದ ಸಿಬ್ಬಂದಿ ಅಗ್ನಿ ದುರಂತದ ಸಂದರ್ಭದಲ್ಲಿ ಹೇಗೆ ಕಾರ್ಯ ನಿರ್ವಹಿಸುತ್ತಾರೆ ಎಂಬುದರ ಕುರಿತು ಪ್ರಾಯೋಗಿಕ ಪ್ರದರ್ಶನವನ್ನು ಸಹ ನೀಡಿದರು. ಅಗ್ನಿ ಅವಘಡಗಳು ಸಂಭವಿಸಿದಾಗ ಅವುಗಳನ್ನು ಸಮರ್ಥವಾಗಿ ನಿರ್ವಹಿಸಲು ಕನಿಷ್ಠ ತಿಳುವಳಿಕೆ ಹೊಂದಿರುವುದು ಅವಶ್ಯಕ ಎಂದು ಅಧಿಕಾರಿಗಳು ತಿಳಿಸಿದರು.

ಈ ಕಾರ್ಯಕ್ರಮವನ್ನು ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ವಿಭಾಗದ ಮುಖ್ಯಸ್ಥೆ ಪ್ರೊ. ರಾಜೇಶ್ವರಿ ಎನ್. ಆಯೋಜಿಸಿದ್ದು, ಪ್ರೊ. ವರಪ್ರಸಾದ ಜಿ. ಅವರು ಸಂಯೋಜಿಸಿದ್ದರು. ನೂರಕ್ಕೂ ಹೆಚ್ಚು ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು ಎಂದು ಕಾಲೇಜಿನ ಪ್ರಾಂಶುಪಾಲರಾದ ಡಾ. ವಿ.ಎ. ಕುಲಕರ್ಣಿ ತಿಳಿಸಿದ್ದಾರೆ.

ನಮ್ಮ ನಡುವಿನ ಮಾತುಕತೆ
ಜನಮಾಧ್ಯಮ

September 25, 2025

# ಅಗ್ನಿಶಾಮಕ ಮತ್ತು ವಿಪತ್ತು ನಿರ್ವಹಣೆ ಪ್ರಾತ್ಯಕ್ಷಿಕೆ ಕಾರ್ಯಕ್ರಮ



**»ಜನಮಾಧ್ಯಮ, ಹಳಿಯಾಳ:** ಕೆಎಲ್‌ಎಸ್ ವಿಡಿಐಟಿ ಹಳಿಯಾಳದಲ್ಲಿ ಅಗ್ನಿಶಾಮಕ ದಳದ ವತಿಯಿಂದ ಅಗ್ನಿಶಾಮಕ ವಿಧಾನಗಳ ಕುರಿತು ಅರಿವು ಮೂಡಿಸುವ ಪ್ರಾತ್ಯಕ್ಷಿಕೆ ಕಾರ್ಯಕ್ರಮವು ಸೆ. 24ರಂದು ಜರುಗಿತು.

ಪಟ್ಟಣದ ಅಗ್ನಿಶಾಮಕ ದಳದ ಅಧಿಕಾರಿಗಳಾದ ಎ ಎಸ್ ವಡ್ಡರ್ ಹಾಗೂ ಬಿ ಬಿ ದಳವಾಯಿ ವಿದ್ಯಾರ್ಥಿಗಳಿಗೆ ಅಗ್ನಿ ಅವಘಡ ಸಂಭವಿಸಿದಾಗ ವಹಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಕುರಿತಾಗಿ ಮಾಹಿತಿ ನೀಡಿದರು. ಘನ, ದ್ರವ, ಅನಿಲಗಳಿಂದ ಸಂಭವಿಸುವ ಅಗ್ನಿ ದುರಂತಗಳಲ್ಲಿ ಅಗ್ನಿ ನಂದಿಸಲು ಬಳಸಬೇಕಾದ ವಸ್ತುಗಳು ಹಾಗೂ ವಿಧಾನಗಳ ಕುರಿತಾಗಿ ಸಮಗ್ರ ವಿವರಣೆ ನೀಡಿದರು. ಅಡುಗೆ ಅನಿಲ ಸೋರಿಕೆ, ಸಿಲಿಂಡರ್ ಗಳಿಗೆ ಬೆಂಕಿ ತಗುಲಿದಾಗ ನಂದಿಸುವ ರೀತಿಯನ್ನು ಪ್ರಾಯೋಗಿಕವಾಗಿ ತೋರಿಸಿದರು. ಹಳಿಯಾಳ ಅಗ್ನಿಶಾಮಕ ದಳದ ಸಿಬ್ಬಂದಿಗಳು ಅಗ್ನಿ ದುರಂತದ ಸಂದರ್ಭದಲ್ಲಿ ಅಗ್ನಿಶಾಮಕದಳವು ಕಾರ್ಯ ನಿರ್ವಹಿಸುವ ಪರಿಯನ್ನು ಪ್ರಾಯೋಗಿಕವಾಗಿ ತೋರಿಸಿದರು. ಅಗ್ನಿ ಅವಘಡಗಳು ಸಂಭವಿಸಿದಾಗ ಸಮರ್ಪಕವಾಗಿ ನಿರ್ವಹಿಸಲು ಕನಿಷ್ಠ ತಿಳುವಳಿಕೆ ಹೊಂದುವುದು ಅತ್ಯಗತ್ಯವಾಗಿದೆ. ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ ವಿಭಾಗದ ಮುಖ್ಯಸ್ಥೆ ಪ್ರೊ. ರಾಜೇಶ್ವರಿ ಎನ್. ಕಾರ್ಯಕ್ರಮ ಆಯೋಜಿಸಿದ್ದರು. ಪ್ರೊ. ವರಪ್ರಸಾದ ಜಿ. ಸಂಯೋಜಿಸಿದ್ದರು. ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ ವಿಭಾಗ ಮತ್ತು ಹಳಿಯಾಳ ಅಗ್ನಿಶಾಮಕ ದಳದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ ನೂರಕ್ಕೂ ಅಧಿಕ ವಿದ್ಯಾರ್ಥಿಗಳು ಭಾಗವಹಿಸಿದ್ದರು ಎಂದು ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ತಿಳಿಸಿದ್ದಾರೆ..

# ಅಗ್ನಿಶಾಮಕ ಮತ್ತು ವಿಪತ್ತು ನಿರ್ವಹಣೆ ಪ್ರಾತ್ಯಕ್ಷಿಕೆ ಕಾರ್ಯಕ್ರಮ ಯಶಸ್ವಿ



ಹಳಿಯಾಳ: ಕೆ ಎಲ್ ಎಸ್ ವಿ ಡಿ ಐ ಟಿ ಹಳಿಯಾಳದಲ್ಲಿ ಅಗ್ನಿಶಾಮಕ ದಳದ ವತಿಯಿಂದ ಅಗ್ನಿಶಾಮಕ ವಿಧಾನ ಗಳ ಕುರಿತು ಅರಿವು ಮೂಡಿಸುವ ಪ್ರಾತ್ಯಕ್ಷಿಕೆ ಕಾರ್ಯಕ್ರಮವು ಸಪ್ಟೆಂಬರ್ 24ರಂದು ಜರುಗಿತು.

ಪಟ್ಟಣದ ಅಗ್ನಿಶಾಮಕ ದಳದ ಅಧಿಕಾರಿಗಳಾದ ಎ ಎಸ್ ವಡ್ಡರ್ ಹಾಗೂ ಬಿ ಬಿ ದಳವಾಯಿ ವಿದ್ಯಾರ್ಥಿಗಳಿಗೆ ಅಗ್ನಿ ಅವಘಡ ಸಂಭವಿಸಿದಾಗ ವಹಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಕುರಿತಾಗಿ ಮಾಹಿತಿ ನೀಡಿದರು. ಘನ, ದ್ರವ, ಅನಿಲಗಳಿಂದ ಸಂಭವಿಸುವ ಅಗ್ನಿ ದುರಂತಗಳಲ್ಲಿ ಅಗ್ನಿ ನಂದಿಸಲು ಬಳಸಬೇಕಾದ ವಸ್ತುಗಳು ಹಾಗೂ ವಿಧಾನಗಳ ಕುರಿತಾಗಿ ಸಮಗ್ರ ವಿವರಣೆ ನೀಡಿದರು. ಅಡುಗೆ ಅನಿಲ ಸೋರಿಕೆ, ಸಿಲಿಂಡರ್ ಗಳಿಗೆ ಬೆಂಕಿ ತಗುಲಿದಾಗ ನಂದಿಸುವ ರೀತಿಯನ್ನು ಪ್ರಾಯೋಗಿಕವಾಗಿ ತೋರಿಸಿದರು. ಹಳಿಯಾಳ ಅಗ್ನಿಶಾಮಕ ದಳದ ಸಿಬ್ಬಂದಿಗಳು ಅಗ್ನಿ ದುರಂತದ ಸಂದರ್ಭದಲ್ಲಿ ಅಗ್ನಿಶಾಮಕದಳವು ಕಾರ್ಯ ನಿರ್ವಹಿಸುವ ಪರಿಯನ್ನು ಪ್ರಾಯೋಗಿಕವಾಗಿ ತೋರಿಸಿದರು. ಅಗ್ನಿ ಅವಘಡಗಳು ಸಂಭವಿಸಿದಾಗ ಸಮರ್ಪಕವಾಗಿ ನಿರ್ವಹಿಸಲು ಕನಿಷ್ಠ ತಿಳುವಳಿಕೆ ಹೊಂದುವುದು ಅತ್ಯಗತ್ಯವಾಗಿದೆ. ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ ವಿಭಾಗದ ಮುಖ್ಯಸ್ಥೆ ಪ್ರೊ. ರಾಜೇಶ್ವರಿ ಎನ್ ಕಾರ್ಯಕ್ರಮ ಆಯೋಜಿಸಿದ್ದರು. ಪ್ರೊ. ವರಪ್ರಸಾದ ಜಿ ಸಂಯೋಜಿಸಿದ್ದರು. ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ ವಿಭಾಗ ಮತ್ತು ಹಳಿಯಾಳ ಅಗ್ನಿಶಾಮಕ ದಳದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ ನೂರಕ್ಕೂ ಅಧಿಕ ವಿದ್ಯಾರ್ಥಿಗಳು ಭಾಗವಹಿಸಿದ್ದರು ಎಂದು ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ತಿಳಿಸಿದ್ದಾರೆ.


Powered By KHUSHIHOST ®| License - ePaperCloud.com